## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 507 |
| ಸದಸ್ಯರ ಹೆಸರು | ಶ್ರೀ ಐವನ್ ಡಿ'ಸೋಜಾ<br>(ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | ಅಬಕಾರಿ ಸಚಿವರು |
| ಉತ್ತರಿಸುವ ದಿನಾಂಕ | 20-08-2026 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿನ ನೂತನ ಬಾರ್ ಅನುಮತಿಗೆ ಪರವಾನಿಗೆ ನೀಡಲಾಗುತ್ತಿದೆಯೇ; ನೀಡಿದ್ದಲ್ಲಿ, ಎಷ್ಟು ಪರವಾನಿಗೆ ಪತ್ರ ನೀಡಲಾಗಿದೆ; (ಜಿಲ್ಲಾವಾರು ವಿವರ ನೀಡುವುದು); | ದಿನಾಂಕ:05-12-1992 ರಿಂದ ಸಿಎಲ್-9 (ಬಾರ್) ಸನ್ನದುಗಳನ್ನು ನೀಡಲು ಸರ್ಕಾರವು ನಿರ್ಬಂಧಿಸಿರುವುದರಿಂದ ಯಾವುದೇ ಸಿಎಲ್-9 ಸನ್ನದುಗಳನ್ನು ಮಂಜೂರು ಮಾಡಲಾಗುತ್ತಿಲ್ಲ.<br>ದಿನಾಂಕ:05-12-1992 ರ ಪೂರ್ವದಲ್ಲಿ ಮಂಜೂರಾಗಿರುವ ಸಿಎಲ್-9 ಸನ್ನದುಗಳು ಮಾತ್ರ ಪ್ರಸ್ತುತ ಕಾರ್ಯನಿರ್ವಹಿಸುತ್ತಿವೆ.<br>ಪ್ರಸ್ತುತ ದಿನಾಂಕ:30-06-2026 ರ ಅಂತ್ಯಕ್ಕೆ ರಾಜ್ಯದಲ್ಲಿ 3655 ಸಿಎಲ್-9 ಸನ್ನದುಗಳು ಕಾರ್ಯನಿರ್ವಹಿಸುತ್ತಿವೆ. |
| ಆ) | ಜಿಲ್ಲೆಯ ಕೆಲವು ಗ್ರಾಮಾಂತರ ಭಾಗಗಳಲ್ಲಿ ಸಣ್ಣಪುಟ್ಟ ಅಂಗಡಿಗಳಲ್ಲಿ ಅಕ್ರಮವಾಗಿ ಪರವಾನಿಗೆ ಇಲ್ಲದೇ ಮದ್ಯ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೈಗೊಂಡ ಕ್ರಮವೇನು; | ದಕ್ಷಿಣ ಕನ್ನಡ ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ ಕೆಲವು ವ್ಯಕ್ತಿಗಳು ಸ್ವಲಾಭಕ್ಕಾಗಿ ಅನಧಿಕೃತ ಸ್ಥಳಗಳಲ್ಲಿ ಅಕ್ರಮ ಮದ್ಯ ಮಾರಾಟ ಮಾಡುವ ಪ್ರಕರಣಗಳು ಇಲಾಖೆಯ ಗಮನಕ್ಕೆ ಬಂದಿರುತ್ತದೆ.<br>ಅಕ್ರಮವಾಗಿ ಮದ್ಯ ಮಾರಾಟ ಮಾಡುವುದನ್ನು ತಡೆಗಟ್ಟಲು ಇಲಾಖಾಧಿಕಾರಿಗಳು ವಲಯ ವ್ಯಾಪ್ತಿಯ ರೂಟ್‌ಗಳಲ್ಲಿ ನಿರಂತರವಾಗಿ ಗಸ್ತು ನಡೆಸಿ, ಸದರಿ ಗಸ್ತಿನ ಸಮಯದಲ್ಲಿ ಮತ್ತು ಸಾರ್ವಜನಿಕರಿಂದ ವಿಶೇಷವಾಗಿ ಮಹಿಳೆ/ಮಹಿಳಾ ಸಂಘಗಳಿಂದ ದೂರು ಸ್ವೀಕೃತವಾದಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿರುವ ಸ್ಥಳಗಳ ಮೇಲೆ ದಾಳಿ ನಡೆಸಿ, ಅಕ್ರಮಗಳು ಕಂಡುಬಂದಲ್ಲಿ ಅಬಕಾರಿ ಕಾಯ್ದೆ ಮತ್ತು ನಿಯಮಗಳನುಸಾರ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ.<br>ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳಲ್ಲಿ ನಿಯಮಿತವಾಗಿ ರಸ್ತೆಗಾವಲು ನಡೆಸಿ ಸಂಶಯಾಸ್ಪದ ವಾಹನಗಳನ್ನು ತಪಾಸಣೆಗೆ ಒಳಪಡಿಸಲಾಗುತ್ತಿದೆ. ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸ್ಥಾಯಿ ಸಮಿತಿ ಸಭೆಯನ್ನು ಏರ್ಪಡಿಸಿ ಇತರೆ |

| | | |
|---|---|---|
| | | ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ಅಕ್ರಮ ಹತ್ತಿಕ್ಕಲು ಕ್ರಮವಹಿಸುವ ಕುರಿತು ಪೊಲೀಸ್ ವರಿಷ್ಠಾಧಿಕಾರಿಗಳು ಮತ್ತು ಜಿಲ್ಲಾ ಅರಣ್ಯ ಸಂರಕ್ಷಣಾಧಿಕಾರಿಗಳೊಂದಿಗೆ ಜಂಟಿ ಕಾರ್ಯಚರಣೆ ನಡೆಸಲಾಗುತ್ತಿದೆ. ಕರ್ನಾಟಕ ಅಬಕಾರಿ ಕಾಯ್ದೆ 1965 ರ ಕಲಂ 50 ರಂತೆ ಕಾರ್ಯವ್ಯಾಪ್ತಿಯಲ್ಲಿ ನಡೆಯುವ ಅಬಕಾರಿ ಅಕ್ರಮಗಳ ಕುರಿತು ಮಾಹಿತಿ ನೀಡಲು ತಿಳುವಳಿಕೆ ಪತ್ರ ಜಾರಿಗೊಳಿಸಲಾಗಿರುತ್ತದೆ. |
| ಇ) | ಇಲ್ಲಿಯವರೆಗೆ ದಾಖಲಾದ ಪ್ರಕರಣಗಳ ಸಂಖ್ಯೆ ಎಷ್ಟು; (ವಿವರ ನೀಡುವುದು); | ಕಳೆದ ಮೂರು ವರ್ಷಗಳಲ್ಲಿ (2023-24, 2024-25 ಮತ್ತು 2025-26 ಜುಲೈ ರಿಂದ ಜೂನ್ ಮಾಹೆವರೆಗೆ) ದಕ್ಷಿಣ ಕನ್ನಡ ಜಿಲ್ಲಾ ವ್ಯಾಪ್ತಿಯಲ್ಲಿ ಅಕ್ರಮ ಮದ್ಯ ಮಾರಾಟದ ವಿರುದ್ಧ ಒಟ್ಟು 8,354 ದಾಳಿಗಳನ್ನು ನಡೆಸಿ, 183 ಜಾಮೀನಿಯವಲ್ಲದ (nonbailable) ಪ್ರಕರಣಗಳನ್ನು ಹಾಗೂ ಜಾಮಿನೀಯ ದಂಡ ವಿಧಿಸಬಹುದಾದ (bailable and compoundable) ಕಲಂ-15 ಎ ರ ಒಟ್ಟು 3,115 ಪ್ರಕರಣಗಳನ್ನು ಕರ್ನಾಟಕ ಅಬಕಾರಿ ಕಾಯ್ದೆ ಅನ್ವಯ ದಾಖಲಿಸಿ, 18.68 ಲಕ್ಷ ರೂಗಳನ್ನು ದಂಡದ ರೂಪದಲ್ಲಿ ವಸೂಲಿಸಲಾಗಿರುತ್ತದೆ. ಇದೇ ಅವಧಿಯಲ್ಲಿ 3,702 ಆರೋಪಿತರನ್ನು ದಸ್ತಗಿರಿಗೊಳಪಡಿಸಿ, ಒಟ್ಟು 55,436 ಲೀಟರ್ ಮದ್ಯ, 58,516 ಲೀಟರ್ ಬಿಯರ್ ಹಾಗೂ 50 ವಾಹನಗಳನ್ನು ವಶಪಡಿಸಿಕೊಳ್ಳಲಾಗಿರುತ್ತದೆ.<br>ವರ್ಷವಾರು ವಿವರವನ್ನು ಅನುಬಂಧದಲ್ಲಿ ಒದಗಿಸಿದೆ. |
| ಈ) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪರವಾನಗಿ ಇಲ್ಲದೇ ಅನಧಿಕೃತವಾಗಿ ನಡೆಸುತ್ತಿರುವ ಮದ್ಯ ಮಾರಾಟ ಅಥವಾ ಪಬ್‌ಗಳ ಸಂಖ್ಯೆ ಎಷ್ಟು; ಅಂತಹವರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು? | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪರವಾನಗಿ ಇಲ್ಲದೇ ಅನಧಿಕೃತವಾಗಿ ನಡೆಯುತ್ತಿರುವ ಯಾವುದೇ ಮದ್ಯ ಮಾರಾಟ ಸನ್ನದುಗಳು ಅಥವಾ ಪಬ್‌ಗಳು ಇರುವುದಿಲ್ಲ. |

ಆಇ 76 ಇಎಲ್‌ಕ್ಯೂ 2026

(ಕೆ.ಎಲ್. ಶಿವಲಿಂಗೇಗೌಡ)

ಅಬಕಾರಿ ಸಚಿವರು

## ಅನುಬಂಧ

**ದಕ್ಷಿಣ ಕನ್ನಡ ಜಿಲ್ಲೆಯ ಅನಧಿಕೃತ ಸ್ಥಳಗಳಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡುವವರ ವಿರುದ್ಧ ಕಳೆದ 3 ವರ್ಷಗಳಲ್ಲಿ ದಾಖಲಿಸಿದ ಪ್ರಕರಣಗಳ ವರ್ಷವಾರು ವಿವರ:**

| ಅಬಕಾರಿ ಸಾಲು (ಜುಲೈ ರಿಂದ ಜೂನ್) | ನಡೆಸಿದ ದಾಳಿಗಳ ಸಂಖ್ಯೆ | ದಾಖಲಿಸಿದ ಪ್ರಕರಣಗಳು | | | 15ಎ ಪ್ರಕರಣಗಳಲ್ಲಿ ವಸೂಲಿಸಿದ ದಂಡ (ರೂ.ಗಳಲ್ಲಿ) | ದಸ್ತಗಿರಿಗೆ ಒಳಪಡಿಸಿದ ಆರೋಪಿಗಳ ಸಂಖ್ಯೆ | ವಶಪಡಿಸಿಕೊಂಡ ವಸ್ತುಗಳು | | |
|---|---|---|---|---|---|---|---|---|---|
| | | ಕ.ಅ. ಕಾಯಿದೆ 1965 ರ ಕಲಂ 32, 34 | ಕ.ಅ. ಕಾಯಿದೆ 1965 ರ ಕಲಂ15 ಎ | ದಾಖಲಿಸಿದ ಒಟ್ಟು ಪ್ರಕರಣಗಳು | | | ಮದ್ಯ (ಲೀ.ಗಳಲ್ಲಿ) | ಬಿಯರ್ (ಲೀ.ಗಳಲ್ಲಿ) | ವಾಹನ |
| 2023-24 | 3552 | 92 | 1587 | 1679 | 9,91,650 | 2022 | 54433 | 47771 | 40 |
| 2024-25 | 2690 | 57 | 933 | 990 | 4,83,000 | 1031 | 729 | 10745 | 7 |
| 2025-26 | 2112 | 34 | 595 | 629 | 3,93,500 | 649 | 274 | 0 | 3 |
| **ಒಟ್ಟು** | **8,354** | **183** | **3,115** | **3,298** | **18,68,150** | **3,702** | **55,436** | **58,516** | **50** |

ಆಇ 76 ಇಎಲ್‌ಕ್ಯೂ 2026